ಕರ್ನಾಟಕ ಸರ್ಕಾರ

# ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-3

ಸಂಖ್ಯೆ:ಎಸ್5/ಗ.ಯಂ.ಶಿ.ಪ.ಫ.ಪ್ರ/ಮಾರ್ಚ್-2021/05/2021-22 ದಿನಾಂಕ:20/04/2021

## ಸುತ್ತೋಲೆ

ವಿಷಯ: 2021 ರ ಮಾರ್ಚ್ ಮಾಹೆಯಲ್ಲಿ ನಡೆದ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಫಲಿತಾಂಶ ಪ್ರಕಟಿಸುವ ಬಗ್ಗೆ.

*******

2021 ರ ಮಾರ್ಚ್ ಮಾಹೆಯಲ್ಲಿ ನಡೆದ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಫಲಿತಾಂಶವನ್ನು ದಿನಾಂಕ:21/04/2021 ರ ಅಪರಾಹ್ನ 3:00 ಗಂಟೆಗೆ ಮಂಡಳಿಯ ವೆಬ್ ಸೈಟ್ http://sslc.karnataka.gov.in ನಲ್ಲಿ ಪ್ರಕಟಿಸಲಾಗುವುದು. ಸದರಿ ಫಲಿತಾಂಶವು ಎಲ್ಲಾ ಗಣಕಯಂತ್ರ ಶಿಕ್ಷಣ ಸಂಸ್ಥೆಗಳ ಲಾಗಿನ್‌ನಲ್ಲಿ ದಿನಾಂಕ:22/04/2021 ರಂದು ಲಭ್ಯ ಮಾಡಲಾಗುವುದು. ಸಂಸ್ಥೆಗಳ ಮುಖ್ಯಸ್ಥರು ಫಲಿತಾಂಶ ಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಂಡು ತಮ್ಮ ಸಂಸ್ಥೆಯ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ಫಲಿತಾಂಶದಲ್ಲಿ ತಿದ್ದುಪಡಿ ಇದ್ದಲ್ಲಿ ಫಲಿತಾಂಶ ಪ್ರಕಟಣೆಯಾದ 15 ದಿನಗಳೊಳಗಾಗಿ ಸಂಸ್ಥೆಯ ಮೂಲಕ ಪ್ರಸ್ತಾವನೆ ಸಲ್ಲಿಸುವುದು. ಪ್ರಸ್ತಾವನೆಯನ್ನು ಪರಿಶೀಲಿಸಿ ನಿಯಮಾನುಸಾರ ಫಲಿತಾಂಶವನ್ನು ತಿದ್ದುಪಡಿ ಮಾಡಲು ಕ್ರಮ ವಹಿಸಲಾಗುವುದು. ಪರೀಕ್ಷೆಯಲ್ಲಿ ದುರಾಚರಣೆ, ವಂಚನೆ, ಅನುಚಿತ ವರ್ತನೆ, ನಕಲು ಮಾಡಿರುವುದು ಮೊದಲಾದವುಗಳಿಂದ ಪ್ರಭಾವಿತವಾಗಿದೆ ಎಂದು ಕಂಡು ಬಂದಲ್ಲಿ ಅಂತಹ ಫಲಿತಾಂಶವನ್ನು ಫಲಿತಾಂಶ ಪ್ರಕಟವಾದ ನಂತರವೂ ನಿಯಮಾನುಸಾರ ತಡೆಹಿಡಿಯುವ, ರದ್ದುಪಡಿಸುವ, ಮಾರ್ಪಡಿಸಿ ಪ್ರಕಟಿಸುವ ಅಧಿಕಾರವನ್ನು ಮಂಡಳಿ ಹೊಂದಿರುತ್ತದೆ.

2021 ರ ಮಾರ್ಚ್ ಮಾಹೆಯ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಉತ್ತರ ಪತ್ರಿಕೆಗಳ ಛಾಯಾಪ್ರತಿಗಾಗಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ನಿಗಧಿತ ಅರ್ಜಿ ಸಲ್ಲಿಸುವ ವೇಳಾಪಟ್ಟಿ ಈ ಕೆಳಕಂಡಂತಿದೆ.

| ವಿವರ | ದಿನಾಂಕ |
|---|---|
| 2021 ರ ಮಾರ್ಚ್ ಮಾಹೆಯ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ | 23/04/2021 |
| 2021 ರ ಮಾರ್ಚ್ ಮಾಹೆಯ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಉತ್ತರ ಪತ್ರಿಕೆಗಳ ಸ್ಕ್ಯಾನ್ ಪ್ರತಿಯನ್ನು ಪಡೆಯಲು ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 03/05/2021 |
| 2021 ರ ಮಾರ್ಚ್ ಮಾಹೆಯ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ಅಂಕಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ | 23/04/2021 |
| 2021 ರ ಮಾರ್ಚ್ ಮಾಹೆಯ ಗಣಕಯಂತ್ರ ಶಿಕ್ಷಣ ಪರೀಕ್ಷೆಯ ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನ/ಅಂಕಗಳ ಮರುಎಣಿಕೆಗೆ ಅರ್ಜಿ ಸಲ್ಲಿಸಲು ಅಂತಿಮ ದಿನಾಂಕ | 07/05/2021 |

ಮರುಎಣಿಕೆ ಬಯಸುವ ವಿದ್ಯಾರ್ಥಿಗಳು (ಥಿಯರಿ ಉತ್ತರ ಪತ್ರಿಕೆ ಮಾತ್ರ) ಕಡ್ಡಾಯವಾಗಿ ಸಂಬಂಧಪಟ್ಟ ವಿಷಯದ ಉತ್ತರ ಪತ್ರಿಕೆಯ ಛಾಯಾಪ್ರತಿಯನ್ನು ಪಡೆಯಬೇಕಾಗಿರುತ್ತದೆ. ನೇರವಾಗಿ ಮರುಎಣಿಕೆಗಾಗಿ ಅರ್ಜಿ ಸಲ್ಲಿಸುವಂತಿಲ್ಲ. ಛಾಯಾ ಪ್ರತಿಯನ್ನು ಪಡೆದ ನಂತರ ಅಂಕಗಳ ಎಣಿಕೆಯಲ್ಲಿ ವ್ಯತ್ಯಾಸವಿದ್ದಲ್ಲಿ ಖಚಿತಪಡಿಸಿಕೊಂಡ ನಂತರವೇ ಮರುಎಣಿಕೆಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಈ ಬಗ್ಗೆ ಮಾಹಿತಿಯನ್ನು ಅಭ್ಯರ್ಥಿಗಳಿಗೆ SMS

ಮೂಲಕ ನೋಂದಾಯಿತ ಮೊಬೈಲ್ ಸಂಖ್ಯೆಗೆ ರವಾನಿಸಲಾಗುವುದು ಹಾಗೂ ಅಂಕಗಳಲ್ಲಿ ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ಹಿಂದಿರುಗಿಸಲಾಗುವುದು.

**ಉತ್ತರ ಪತ್ರಿಕೆಗಳ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಮೊದಲು ಉತ್ತರ ಪತ್ರಿಕೆಗಳ ಛಾಯಾಪ್ರತಿ ಪಡೆದ ನಂತರ ಆನ್‌ಲೈನ್ ಮೂಲಕ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಮರುಮೌಲ್ಯಮಾಪನದ ನಂತರ 10 ಅಥವಾ 10ಕ್ಕಿಂತ ಹೆಚ್ಚು ಅಂಕಗಳ ವ್ಯತ್ಯಾಸವಾಗಿದ್ದಲ್ಲಿ ಶುಲ್ಕವನ್ನು ಹಿಂತಿರುಗಿಸಲಾಗುವುದು.**

ಛಾಯಾಪ್ರತಿ ಹಾಗೂ ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಿರುವುದರಿಂದ ಭೌತಿಕವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ರದ್ದುಪಡಿಸಲಾಗಿದೆ. ಛಾಯಾಪ್ರತಿ ಮತ್ತು ಮರುಮೌಲ್ಯಮಾಪನಕ್ಕಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಮಂಡಳಿಯ ಜಾಲತಾಣ ವಿಳಾಸ http://sslc.karnataka.gov.in ದಲ್ಲಿ ಲಭ್ಯವಿದ್ದು, ಸದರಿ ಜಾಲತಾಣದಲ್ಲಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದಾಗಿದೆ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿದ ನಂತರ ನಿಗದಿತ ಶುಲ್ಕವನ್ನು ಆನ್‌ಲೈನ್‌ನಲ್ಲಿ DEBIT CARD/CREDIT CARD/NETBANKING ಮೂಲಕ ಅಥವಾ ಆನ್‌ಲೈನ್‌ನಲ್ಲಿ ಜನರೇಟ್ ಆದ ಚಲನ್ ಬಳಸಿ ಯಾವುದೇ ರಾಷ್ಟ್ರೀಕೃತ ಬ್ಯಾಂಕ್ ಮೂಲಕ ಪಾವತಿಸಬಹುದಾಗಿದೆ. ಛಾಯಾಪ್ರತಿ/ಮರುಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಿದ ನಂತರ ಅರ್ಜಿ ಸ್ವೀಕಾರವಾದ ಬಗ್ಗೆ ನೋಂದಾಯಿಸಿದ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್ ಮುಖಾಂತರ ಮಾಹಿತಿ ರವಾನೆಯಾಗುತ್ತದೆ.

**ಛಾಯಾಪ್ರತಿ ಹಾಗೂ ಮರುಮೌಲ್ಯಮಾಪನ ಅರ್ಜಿಗಳನ್ನು DownLoad ಮಾಡಿಕೊಳ್ಳುವ ಸಂಬಂಧ ಫ್ಲೋಚಾರ್ಟ್‌ನ್ನು ಮಂಡಳಿಯ ವೆಬ್ ಸೈಟಿನಲ್ಲಿ ಲಭ್ಯಗೊಳಿಸಲಾಗಿದೆ.**

| ಶುಲ್ಕದ ವಿವರ | |
|---|---|
| ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ | ರೂ.500/- (ಐದು ನೂರು ರೂಪಾಯಿಗಳು) |
| ಮರುಮೌಲ್ಯಮಾಪನಕ್ಕೆ ಒಂದು ವಿಷಯಕ್ಕೆ ಶುಲ್ಕ | ರೂ.800/- (ಎಂಟು ನೂರು ರೂಪಾಯಿಗಳು) |
| ಉತ್ತರ ಪತ್ರಿಕೆಗಳ ಮರುಎಣಿಕೆ ಒಂದು ವಿಷಯಕ್ಕೆ ಶುಲ್ಕ | ರೂ.150/- (ನೂರ ಐವತ್ತು ರೂಪಾಯಿಗಳು) |

ಉತ್ತರ ಪತ್ರಿಕೆಗಳ ಜೆರಾಕ್ಸ್ ಪ್ರತಿ ಪಡೆಯಲು ಒಂದು ವಿಷಯಕ್ಕೆ ಶುಲ್ಕ 500/-ರಂತೆ ಜೆರಾಕ್ಸ್ ಪ್ರತಿ ಪಡೆಯಲು ಬಯಸುವ ವಿಷಯಕ್ಕೆ ಶುಲ್ಕವನ್ನು ಪಾವತಿಸಬೇಕಾಗಿರುತ್ತದೆ. ಮರುಮೌಲ್ಯಮಾಪನ ಶುಲ್ಕ ಒಂದು ವಿಷಯಕ್ಕೆ ರೂ.800/-ರಂತೆ ಮರುಮೌಲ್ಯಮಾಪನ ಬಯಸುವ ವಿಷಯಕ್ಕೆ ಶುಲ್ಕ ಪಾವತಿಸಬೇಕಾಗಿರುತ್ತದೆ. **ಮಂಡಳಿಯಿಂದ ಉತ್ತರ ಪತ್ರಿಕೆಯ ಛಾಯಾಪ್ರತಿ ಪಡೆಯದೇ ನೇರವಾಗಿ ಮರುಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಅವಕಾಶವಿರುವುದಿಲ್ಲ. ಅರ್ಜಿ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು ಮತ್ತು ಪಾವತಿಸಿದ ಹಣವನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುವುದು.**

ಛಾಯಾಪ್ರತಿಯನ್ನು ಭೌತಿಕವಾಗಿ ಅಂಚೆ ಮೂಲಕ ಅರ್ಜಿಯಲ್ಲಿ ನಮೂದಿಸಿದ ವಿಳಾಸಕ್ಕೆ ರವಾನಿಸುವ ಕಾರ್ಯವನ್ನು ಪ್ರಸಕ್ತ ಸಾಲಿನಿಂದ ಕೈಬಿಡಲಾಗಿದೆ. ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳನ್ನು ಅಪ್‌ಲೋಡ್ ಮಾಡಲಾಗುವುದು. ಉತ್ತರ ಪತ್ರಿಕೆಗಳನ್ನು ಅಪ್‌ಲೋಡ್ ಮಾಡಿದ ಮಾಹಿತಿಯನ್ನು ವಿದ್ಯಾರ್ಥಿಗಳು ಅರ್ಜಿಯಲ್ಲಿ ನೀಡಿರುವ ಮೊಬೈಲ್ ಸಂಖ್ಯೆಗೆ ರವಾನಿಸಲಾಗುವುದು. ಸದರಿ ಮಾಹಿತಿಯು ಸ್ವೀಕೃತವಾದ ನಂತರ ವಿದ್ಯಾರ್ಥಿಗಳು ಉತ್ತರ ಪತ್ರಿಕೆಯನ್ನು ಮೇಲ್ಕಾಣಿಸಿದ ಜಾಲತಾಣದಿಂದ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

## ಫಲಿತಾಂಶಕ್ಕೆ ಸಂಬಂಧಿಸಿದಂತೆ ಸಂಸ್ಥೆಯ ಮುಖ್ಯಸ್ಥರಿಗೆ ಸೂಚನೆಗಳು

**2021 ರ ಮಾರ್ಚ್ ಮಾಹೆಯ ಪರೀಕ್ಷೆಯ ಫಲಿತಾಂಶ ಪಟ್ಟಿಯನ್ನು ಮಂಡಳಿಯ ಜಾಲತಾಣದಲ್ಲಿ ಸಂಸ್ಥೆಯ ಲಾಗಿನ್ ಮೂಲಕ ಡೌನ್‌ಲೋಡ್ ಮಾಡಿಕೊಂಡು ಕೆಳಕಂಡ ಅಂಶಗಳ ಆಧಾರದ ಮೇಲೆ ಆಯಾ ಸಂಸ್ಥೆಯ ಎಲ್ಲಾ ವಿದ್ಯಾರ್ಥಿಗಳ ಫಲಿತಾಂಶವನ್ನು ಕಡ್ಡಾಯವಾಗಿ ಆಯಾ ಸಂಸ್ಥೆಯ ಮುಖ್ಯಸ್ಥರು ಪರಿಶೀಲಿಸಲು ತಿಳಿಸಿದೆ. ಹಾಗೂ ಯಾವುದೇ ಕಾರಣಕ್ಕೂ ಮಂಡಳಿಯಿಂದ ಫಲಿತಾಂಶ ಪಟ್ಟಿಯನ್ನು ಭೌತಿಕವಾಗಿ ಸಂಸ್ಥೆಗಳಿಗೆ ಕಳುಹಿಸಲಾಗುವುದಿಲ್ಲ.**

- ಗಣಕಯಂತ್ರ ಶಿಕ್ಷಣ ಸಂಸ್ಥೆಗಳಿಂದ ಪರೀಕ್ಷಾ ಮಂಡಳಿಗೆ ಪತ್ರ ವ್ಯವಹರಿಸುವ ಪ್ರತಿಯೊಂದು ಪತ್ರದ ಮುಖ ಪುಟದಲ್ಲಿ ತಮ್ಮ ಸಂಸ್ಥೆಗೆ ನೀಡಿರುವ ಶಾಲೆಯ ಸಂಕೇತ ಸಂಖ್ಯೆ ದೂರವಾಣಿ ಸಂಖ್ಯೆ ಮತ್ತು E-Mail ವಿಳಾಸ ವನ್ನು ತಪ್ಪದೇ ನಮೂದಿಸುವುದು
- ಮಾರ್ಚ್–2021 ರಲ್ಲಿ ಪರೀಕ್ಷೆ ಬರೆದ ಎಲ್ಲಾ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗಿರುವ ಬಗ್ಗೆ ಪರಿಶೀಲಿಸಿಕೊಳ್ಳುವುದು.
- ಒಂದು ವೇಳೆ ಯಾವುದಾದರೂ ಅಭ್ಯರ್ಥಿಗಳ ಫಲಿತಾಂಶ ಪ್ರಕಟವಾಗದಿದ್ದಲ್ಲಿ, ಫಲಿತಾಂಶ ತಡೆಹಿಡಿದಿದ್ದಲ್ಲಿ ಫಲಿತಾಂಶ ಪ್ರಕಟಿಸಿದ 15 ದಿನಗಳೊಳಗಾಗಿ ಸಕಾರಣಗಳೊಂದಿಗೆ ಮಂಡಳಿಗೆ ಪತ್ರ ಬರೆದು ಫಲಿತಾಂಶ ಪಡೆದುಕೊಳ್ಳಲು ತಿಳಿಸಿದೆ.
- ಅಭ್ಯರ್ಥಿಯ ಹೆಸರು, ತಂದೆಯ ಹೆಸರು, ತಾಯಿಯ ಹೆಸರು, ಜನ್ಮ ದಿನಾಂಕ ಇತ್ಯಾದಿ ಸಣ್ಣಪುಟ್ಟ ತಿದ್ದುಪಡಿಗಳಿದ್ದಲ್ಲಿ ಪ್ರಸ್ತಾವನೆಯನ್ನು ಪೂರಕ ದೃಢೀಕೃತ ದಾಖಲೆಗಳೊಂದಿಗೆ **(ಕಡ್ಡಾಯವಾಗಿ ಎಸ್.ಎಸ್.ಎಲ್.ಸಿ ದೃಢೀಕೃತ ಅಂಕಪಟ್ಟಿ) ರೂ.200/–** ದಂಡ ಶುಲ್ಕವನ್ನು ಮಂಡಳಿಗೆ ಪಾವತಿಸಲಾಗಿರುವ Neft Challan ನ ಮೂಲ ಪ್ರತಿಯೊಂದಿಗೆ ಸಲ್ಲಿಸತಕ್ಕದ್ದು.
- ಪ್ರಕಟಿಸಿದ ಫಲಿತಾಂಶ ತಾತ್ಕಾಲಿಕವಾಗಿದ್ದು, ಅಭ್ಯರ್ಥಿಗೆ ಮಂಡಳಿಯಿಂದ ನೀಡುವ ಅಂಕಪಟ್ಟಿಯು ಆಯಾ ಅಭ್ಯರ್ಥಿಯ ನೈಜ ಫಲಿತಾಂಶವನ್ನು ತಿಳಿಸುತ್ತದೆ. ಅಂದರೆ ಅಂಕಪಟ್ಟಿಯಲ್ಲಿ ನೀಡಿದ ದತ್ತಾಂಶಗಳೇ ಅಂತಿಮ ಎಂದು ಭಾವಿಸತಕ್ಕದ್ದು.
- ತಮ್ಮ ಸಂಸ್ಥೆಗೆ ಸಂಬಂಧಿಸದೇ ಇರುವ ಫಲಿತಾಂಶ ಪಟ್ಟಿ ಅಥವಾ ಅಂಕಪಟ್ಟಿಗಳು ಬಂದಲ್ಲಿ, **080–23360073** ದೂರವಾಣಿ ಮೂಲಕ ಮಂಡಳಿಗೆ ತಿಳಿಸಿ, ಕೂಡಲೇ ಮಂಡಳಿಗೆ ಹಿಂದಿರುಗಿಸಲು ಸೂಚಿಸಿದೆ.

ಮೇಲಿನ ಎಲ್ಲಾ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ಈ ಸುತ್ತೋಲೆಯ ಪ್ರತಿಯನ್ನು ಮತ್ತು ಪರೀಕ್ಷಾ ಫಲಿತಾಂಶ ಪಟ್ಟಿಯನ್ನು ಸಕಾಲದಲ್ಲಿ ಸಂಬಂಧಿಸಿದ ಗಣಕಯಂತ್ರ ಶಿಕ್ಷಣ ಸಂಸ್ಥೆಗಳ ಸೂಚನಾ ಫಲಕದಲ್ಲಿ ಪ್ರಕಟಿಸಲು ಸೂಚಿಸಿದೆ.

21/6/2021

**(ಎಸ್ ಗೀತಾ)**
**ನಿರ್ದೇಶಕರು**
**(ಇತರೆ ಪರೀಕ್ಷೆಗಳು)**

**ಪ್ರತಿಯನ್ನು:**

1. ರಾಜ್ಯದ ಎಲ್ಲಾ ಗಣಕಯಂತ್ರ ಶಿಕ್ಷಣ ಶಾಲೆಗಳ ಪ್ರಾಚಾರ್ಯರುಗಳಿಗೆ ಮುಂದಿನ ಕ್ರಮಕ್ಕಾಗಿ,
2. ರಾಜ್ಯದ ಎಲ್ಲಾ ವಿಭಾಗೀಯ ಮಟ್ಟದ ಪ್ರಾದೇಶಿಕ ಪರೀಕ್ಷಾ ಮಂಡಳಿಯ ಕಾರ್ಯದರ್ಶಿಗಳಿಗೆ ಕ್ರಮಕ್ಕಾಗಿ,
3. ನಿರ್ದೇಶಕರು(ಇತರೆ ಪರೀಕ್ಷೆಗಳು)/ಕಾರ್ಯದರ್ಶಿಗಳ ಆಪ್ತ ಶಾಖೆಗೆ ಮಾಹಿತಿಗಾಗಿ,
4. ಶಾಖಾಧಿಕಾರಿಗಳು ಕಂಪ್ಯೂಟರ್ ಶಾಖೆರವರಿಗೆ ಮಂಡಳಿಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಅಗತ್ಯ ಕ್ರಮಕ್ಕಾಗಿ
5. ಕಛೇರಿ ಪ್ರತಿ